# ಕರ್ನಾಟಕ ಸರ್ಕಾರದ ನಡವಳಿಗಳು.

**ವಿಷಯ:** ಶ್ರೀ ಸಿ.ಎಂ.ಸಿದ್ದರಾಜು, ಅಧ್ಯಕ್ಷರು, ಹುಲಿಕೆರೆ ಗ್ರಾಮ ಪಂಚಾಯಿತಿ, ಶ್ರೀರಂಗಪಟ್ಟಣ ತಾಲ್ಲೂಕು, ಮಂಡ್ಯ ಜಿಲ್ಲೆ ರವರ ವಿರುದ್ಧ ಅಪರ ಪೊಲೀಸ್ ಮಹಾನಿರ್ದೇಶಕರು ಭ್ರಷ್ಟಾಚಾರ ನಿಗ್ರಹ ದಳ ಬೆಂಗಳೂರು ರವರ ಪತ್ರದಂತೆ 48(4) ರನ್ವಯ ಕ್ರಮ ಜರುಗಿಸುವ ಬಗ್ಗೆ.

**ಓದಲಾಗಿದೆ:**

1) ಅಪರ ಪೊಲೀಸ್ ಮಹಾ ನಿರ್ದೇಶಕರು, ಭ್ರಷ್ಟಾಚಾರ ನಿಗ್ರಹ ದಳ, ಬೆಂಗಳೂರು ರವರ ಪತ್ರ ಸಂಖ್ಯೆ:ಎಸಿಬಿ/ಮಂಡ್ಯ/ಮೊ.ಸಂ.04/2016 ದಿನಾಂಕ 22-12-2016
2) ಸರ್ಕಾರದ ಇದೇ ಸಮಸಂಖ್ಯೆಯ ದಿನಾಂಕ: 10-01-2017 ರ ಕಾರಣ ಕೇಳುವ ನೋಟೀಸ್
3) ಶ್ರೀ ಸಿ.ಎಂ.ಸಿದ್ದರಾಜು, ಅಧ್ಯಕ್ಷರು, ಹುಲಿಕೆರೆ ಗ್ರಾಮ ಪಂಚಾಯಿತಿ, ಶ್ರೀರಂಗಪಟ್ಟಣ ತಾಲ್ಲೂಕು, ಮಂಡ್ಯ ಜಿಲ್ಲೆ ರವರು ಕಾರಣ ಕೇಳಿ ನೋಟೀಸಿಗೆ ಸಲ್ಲಿಸಿರುವ ಉತ್ತರ, ದಿನಾಂಕ 08.02.2017

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ದಿನಾಂಕ: 22-12-2016.ರ ಅಪರ ಪೊಲೀಸ್ ಮಹಾ ನಿರ್ದೇಶಕರು, ಭ್ರಷ್ಟಾಚಾರ ನಿಗ್ರಹ ದಳ, ಬೆಂಗಳೂರು ರವರ ಪತ್ರದಲ್ಲಿ ಶ್ರೀ ಸಿ.ಎಂ.ಸಿದ್ದರಾಜು, ಮಂಡ್ಯ ಜಿಲ್ಲೆ, ಶ್ರೀರಂಗಪಟ್ಟಣ ತಾಲ್ಲೂಕು, ಹುಲಿಕೆರೆ ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಇವರು ಟೆಕ್ ಫ್ರೇಕ್ಸ್ ಸಾಫ್ಟ್‌ವೇರ ಪ್ರೈವೇಟ್ ಲಿ. ಮೈಸೂರು ರವರಿಂದ ಹುಲಿಕೆರೆ ಗ್ರಾಮ ಪಂಚಾಯಿತಿ ಕಾರ್ಯಾಲಯಕ್ಕೆ ಸಿಸಿ ಕ್ಯಾಮರ ಅಳವಡಿಸಿದ್ದು, ಅದರ ಬಿಲ್ಲಿನ ಮೊತ್ತ 12,072/- ಗಳನ್ನು ಪಾವತಿ ಮಾಡಲು 2,000/- ಲಂಚದ ಬೇಡಿಕೆ ಇಟ್ಟು ಈ ಬಗ್ಗೆ ದಿನಾಂಕ: 05-02-2016 ರಂದು ಟ್ರ್ಯಾಪ್ ಹಣದೊಂದಿಗೆ ದಸ್ತಗಿರಿ ಮಾಡಿರುವುದಾಗಿ ಅಪರ ಪೊಲೀಸ್ ಮಹಾನಿರ್ದೇಶಕರು ಭ್ರಷ್ಟಾಚಾರ ನಿಗ್ರಹ ದಳ ಬೆಂಗಳೂರು ರವರು ತಮ್ಮ ಪತ್ರದಲ್ಲಿ ತಿಳಿಸಿರುತ್ತಾರೆ ಹಾಗೂ ಸದರಿಯವರ ಸದಸ್ಯತ್ವ ರದ್ದುಗೊಳಿಸುವ ಕುರಿತು ಅಗತ್ಯ ಕ್ರಮಗಳನ್ನು ಕೈಗೊಳ್ಳಲು ಕೋರಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರಲ್ಲಿ ಶ್ರೀ ಸಿ.ಎಂ.ಸಿದ್ದರಾಜು, ಅಧ್ಯಕ್ಷರು, ಹುಲಿಕೆರೆ ಗ್ರಾಮ ಪಂಚಾಯಿತಿ, ಶ್ರೀರಂಗಪಟ್ಟಣ ತಾಲ್ಲೂಕು, ಮಂಡ್ಯ ಜಿಲ್ಲೆ ಇವರಿಗೆ ದಿನಾಂಕ: 10-01-2017 ರಂದು ಕಾರಣ ಕೇಳುವ ನೋಟೀಸ್ ಜಾರಿಗೊಳಿಸಲಾಗಿದ್ದು, ಸದರಿ ಕಾರಣ ಕೇಳುವ ನೋಟೀಸಿಗೆ ಶ್ರೀ ಸಿ.ಎಂ.ಸಿದ್ದರಾಜು ರವರ ದಿನಾಂಕ: 08-02-2017 ರಂದು ಲಿಖಿತ ಸಮಜಾಯಿಷಿ ನೀಡಿರುತ್ತಾರೆ. ತಮ್ಮ ಸಮಜಾಯಿಷಿಯಲ್ಲಿ ಸದರಿ ಲಂಚ ಪ್ರಕರಣವು ರಾಜಕೀಯ ದುರುದ್ದೇಶದಿಂದ ಕೂಡಿದ್ದು, ಇದೊಂದು ಸುಳ್ಳು ಅಪವಾದವಾಗಿರುತ್ತದೆ ಹಾಗೂ ಸದರಿ ಪ್ರಕರಣವು ನ್ಯಾಯಾಲಯದಲ್ಲಿ ಇರುವುದರಿಂದ ಪ್ರಕರಣ ಇತ್ಯರ್ಥವಾಗುವವರೆಗೆ ಸದಸ್ಯತ್ವದಿಂದ ತೆಗೆದು ಹಾಕುವ ನಿರ್ಧಾರ ಕೈಬಿಡಬೇಕೆಂದು ಪ್ರಾರ್ಥಿಸಿರುತ್ತಾರೆ. ತನ್ನ ಮೇಲೆ ಮಾಡಿರುವ ಆರೋಪಗಳನ್ನು ಕೈಬಿಡಲು ಕೋರಿರುತ್ತಾರೆ"

ಸರ್ಕಾರವು ಪ್ರಸ್ತಾವನೆಯನ್ನು ಕೂಲಂಕುಷವಾಗಿ ಪರಿಶೀಲಿಸಿದೆ. ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 48 ರ ಉಪ ಪ್ರಕರಣ 4 ರಲ್ಲಿ ಈ ಕೆಳಕಂಡಂತಿದೆ.

4) "ಗ್ರಾಮ ಪಂಚಾಯತಿಯ ಪ್ರತಿಯೊಬ್ಬ ಅಧ್ಯಕ್ಷನನ್ನು ಮತ್ತು ಉಪಾಧ್ಯಕ್ಷನನ್ನು, ಅಧ್ಯಕ್ಷನಾಗಿ ಅಥವಾ ಉಪಾಧ್ಯಕ್ಷನಾಗಿ ಅವನ ಕರ್ತವ್ಯಗಳ ನಿರ್ವಹಣೆಯಲ್ಲಿ ನಿರಂತರ ಅಲಕ್ಷತೆ ತೋರುತ್ತಿರುವುದಕ್ಕಾಗಿ ಅಥವಾ ದುರ್ನಡತೆಯ ತಪ್ಪಿತಸ್ಥನಾಗಿರುವುದಕ್ಕಾಗಿ ಅಧ್ಯಕ್ಷ ಅಥವಾ ಉಪಾಧ್ಯಕ್ಷ ಹುದ್ದೆಯಿಂದ, ಅವನಿಗೆ ಅಹವಾಲು ಹೇಳಿಕೊಳ್ಳಲು ಒಂದು ಅವಕಾಶವನ್ನು ಕೊಟ್ಟ ತರುವಾಯ ಮತ್ತು ಅವಶ್ಯಕವಾದಲ್ಲಿ ತಾಲ್ಲೂಕು ಪಂಚಾಯತಿಯಿಂದ ವರದಿಯೊಂದನ್ನು ಪಡೆದುಕೊಂಡು ಅದನ್ನು ಪರಿಶೀಲಿಸಿದ ತರುವಾಯ ಸರ್ಕಾರವು ಆ ಹುದ್ದೆಯಿಂದ, ತೆಗೆದುಹಾಕಬಹುದಾಗಿರತಕ್ಕದ್ದು ಮತ್ತು ಹಾಗೆ ತೆಗೆದುಹಾಕಲಾದ ಅಧ್ಯಕ್ಷನು ಅಥವಾ ಉಪಾಧ್ಯಕ್ಷನು (2)ನೇ ಉಪ-ಪ್ರಕರಣದ ಅಡಿಯಲ್ಲಿ ಸದಸ್ಯನಾಗಿರುವುದು ನಿಂತುಹೋಗಿರದಿದ್ದಲ್ಲಿ ಅವನು ಅಂಥ ಗ್ರಾಮ ಪಂಚಾಯತಿಯ ಸದಸ್ಯ ಹುದ್ದೆಯ ಉಳಿದ ಅವಧಿಯಲ್ಲಿ ಅಧ್ಯಕ್ಷನಾಗಿ ಅಥವಾ ಉಪಾಧ್ಯಕ್ಷನಾಗಿ ಮರು ಚುನಾವಣೆಗೆ ಅರ್ಹನಾಗಿರತಕ್ಕದ್ದಲ್ಲ."

ಶ್ರೀರಂಗಪಟ್ಟಣ ತಾಲ್ಲೂಕು, ಹುಲಿಕೆರೆ ಗ್ರಾಮ ಪಂಚಾಯಿತಿ ಅಧ್ಯಕ್ಷರನ್ನು ಲಂಚದ ಹಣವನ್ನು ಸ್ವೀಕರಿಸುವಾಗ ಭ್ರಷ್ಟಾಚಾರ ನಿಗ್ರಹ ದಳ ಟ್ರ್ಯಾಪ್ ಮಾಡಿರುವ ಪ್ರಕರಣವು ದುರ್ನಡತೆಯ ಗಂಭೀರ ಸ್ವರೂಪದಾಗಿರುತ್ತದೆ. ಈ ವಿಷಯದಲ್ಲಿ ಆರಕ್ಷಕ ನಿರೀಕ್ಷಕರು, ಎ.ಸಿ.ಬಿ. ಪೋಲೀಸ್ ಠಾಣೆ, ಮಂಡ್ಯ ರವರು ಎಫ್.ಐ.ಆರ್. ಹಾಕಿರುವುದರಿಂದ ಮೇಲ್ನೋಟಕ್ಕೆ ದುರ್ನಡತೆಯು ಸಾಬೀತಾಗುತ್ತದೆ. ಅಧ್ಯಕ್ಷರು ನ್ಯಾಯಾಂಗ ಬಂಧನದಲ್ಲಿ ಸುಮಾರು 2 ದಿನಗಳ ಕಾರಾಗೃಹ ವಾಸದಲ್ಲಿದ್ದು, ಈಗ ಜಾಮೀನಿನ ಮೇಲೆ ಬಿಡುಗಡೆಯಾಗಿರುತ್ತಾರೆ.

ಈ ಹಿನ್ನೆಲೆಯಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 48 ರ ಉಪ ಪ್ರಕರಣ 4 ರನ್ವಯ ಶ್ರೀ ಸಿ.ಎಂ.ಸಿದ್ದರಾಜು, ಅಧ್ಯಕ್ಷರು, ಹುಲಿಕೆರೆ ಗ್ರಾಮ ಪಂಚಾಯಿತಿ, ಶ್ರೀರಂಗಪಟ್ಟಣ ತಾಲ್ಲೂಕು, ಮಂಡ್ಯ ಜಿಲ್ಲೆ ಇವರನ್ನು ದುರ್ನಡತೆ ಎಸಗಿರುವ ಆರೋಪದ ಮೇಲೆ ಸದರಿ ಗ್ರಾಮ ಪಂಚಾಯತಿಯ ಅಧ್ಯಕ್ಷ ಸ್ಥಾನದಿಂದ ತೆಗೆದುಹಾಕಲು ಸರ್ಕಾರವು ನಿರ್ಣಯಿಸಿದೆ.ಅದರಂತೆ ಈ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 46 ಗ್ರಾಪಂಅ 2017 ಬೆಂಗಳೂರು, ದಿನಾಂಕ:24.08.2017</u>**

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಸಿ.ಎಂ.ಸಿದ್ದರಾಜು, ಅಧ್ಯಕ್ಷರು, ಹುಲಿಕೆರೆ ಗ್ರಾಮ ಪಂಚಾಯಿತಿ, ಶ್ರೀರಂಗಪಟ್ಟಣ ತಾಲ್ಲೂಕು, ಮಂಡ್ಯ ಜಿಲ್ಲೆ ಇವರು ಲಂಚದ ಹಣವನ್ನು ಸ್ವೀಕರಿಸುವಾಗ ಭ್ರಷ್ಟಾಚಾರ ನಿಗ್ರಹ ದಳದ ಟ್ರ್ಯಾಪ್ ಆಗಿರುವ ಪ್ರಕರಣವು ದುರ್ನಡತೆಯ ಗಂಭೀರ ಸ್ವರೂಪದಾಗಿರುವುದರಿಂದ, ತನ್ನ ಕರ್ತವ್ಯಗಳನ್ನು ನಿರ್ವಹಿಸುವಾಗ ದುರ್ನಡತೆಯು ಅಥವಾ ತಲೆ ತಗ್ಗಿಸುವಂಥ ನಡತೆಯ ತಪ್ಪಿತಸ್ಥನಾಗಿರುವ ಹಿನ್ನೆಲೆಯಲ್ಲಿ, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 48(4) ರನ್ವಯ ಕ್ರಮ ಜರುಗಿಸಿ, ಶ್ರೀ ಸಿ.ಎಂ.ಸಿದ್ದರಾಜು, ಅಧ್ಯಕ್ಷರು. ಹುಲಿಕೆರೆ ಗ್ರಾಮ ಪಂಚಾಯಿತಿ, ಶ್ರೀರಂಗಪಟ್ಟಣ ತಾಲ್ಲೂಕು, ಮಂಡ್ಯ ಜಿಲ್ಲೆ ರವರನ್ನು ಅಧ್ಯಕ್ಷ ಸ್ಥಾನದಿಂದ ತೆಗೆದು ಹಾಕಿ ಆದೇಶಿಸಿದೆ.

*(ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್),*
*ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ ರವರಿಂದ ಅನುಮೋದಿತ)*

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

**(ಟಿ.ವಿ.ಅರುಣ್ ಕುಮಾರ್)**
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

<u>ಪ್ರತಿ:</u>

1) ಜಿಲ್ಲಾಧಿಕಾರಿಗಳು, ಮಂಡ್ಯ ಜಿಲ್ಲೆ.
2) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಮಂಡ್ಯ ಜಿಲ್ಲಾ ಪಂಚಾಯತಿ, ಮಂಡ್ಯ.
3) ಕಾರ್ಯನಿರ್ವಾಹಕ ಅಧಿಕಾರಿ, ಶ್ರೀರಂಗಪಟ್ಟಣ ತಾಲ್ಲೂಕು ಪಂಚಾಯತಿ, ಮಂಡ್ಯ.
   (ಸದರಿಯವರಿಗೆ ಆದೇಶದ ಪ್ರತಿಯನ್ನು ತಲುಪಿಸಿ, ಸ್ವೀಕೃತಿಯನ್ನು ಸರ್ಕಾರಕ್ಕೆ ಕಳುಹಿಸಲು ತಿಳಿಸಿದೆ)
4) ಶ್ರೀ ಸಿ.ಎಂ.ಸಿದ್ದರಾಜು, ಅಧ್ಯಕ್ಷರು, ಹುಲಿಕೆರೆ ಗ್ರಾಮ ಪಂಚಾಯಿತಿ, ಶ್ರೀರಂಗಪಟ್ಟಣ ತಾಲ್ಲೂಕು, ಮಂಡ್ಯ ಜಿಲ್ಲೆ.
5) ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಹುಲಿಕೆರೆ ಗ್ರಾಮ ಪಂಚಾಯಿತಿ, ಶ್ರೀರಂಗಪಟ್ಟಣ ತಾಲ್ಲೂಕು, ಮಂಡ್ಯ ಜಿಲ್ಲೆ.
6) ಗಣಕ ಕೋಶ
7) ಹೆಚ್ಚುವರಿ ಪ್ರತಿ.

<u>ಪ್ರತಿಯನ್ನು ಮಾಹಿತಿಗಾಗಿ:</u>

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ. ಬೆಂಗಳೂರು.

2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.

3) ಅಪರ ಪೊಲೀಸ್ ಮಹಾ ನಿರ್ದೇಶಕರು, ಭ್ರಷ್ಟಾಚಾರ ನಿಗ್ರಹ ದಳ, ನಂ-49, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು-01

4) ನಿರ್ದೇಶಕರು(ಪಂ.ರಾಜ್-1), ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕರು.